**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003**

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2018/2017-18 ದಿನಾಂಕ: 04.09.2017

**:: ಜ್ಞಾಪನ ::**

ವಿಷಯ:- 2018ನೇ ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ರಾಜ್ಯದ ಶಾಲಾ/ ಕಾಲೇಜುಗಳಿಂದ ಅರ್ಜಿಗಳನ್ನು ಆಹ್ವಾನಿಸಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:- ಮಂಡಳಿ ಆಧಿಸೂಚನೆ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2018/ 2017-18 ದಿನಾಂಕ: 08.08.2017

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018ನೇ ಏಪ್ರಿಲ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳಿಂದ ಹಾಜರಾಗುವ ವಿದ್ಯಾರ್ಥಿಗಳಿಂದ ಹಾಗೂ ಖಾಸಗಿ ಅಭ್ಯರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಉಲ್ಲೇಖದ ದಿನಾಂಕ: 08-08-2017ರ ಅಧಿಸೂಚನೆಯಲ್ಲಿ ಶುಲ್ಕ ಪಾವತಿಸಲು ಕೊನೆಯ ದಿನಾಂಕವನ್ನು ನಿಗಧಿಪಡಿಸಿರುವುದನ್ನು ಸ್ಮರಿಸಲಾಗಿದೆ.

ರಾಜ್ಯದ ಕೆಲವು ಶಾಲೆಗಳಿಂದ ಹಾಗೂ ಪೋಷಕರಿಂದ ಮಂಡಳಿಗೆ ದೂರವಾಣಿಯ ಮುಖಾಂತರ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ, ಪರೀಕ್ಷಾ ಶುಲ್ಕ ಪಾವತಿ ಹಾಗೂ ಪ್ರಸ್ತಾವನೆ ಸಲ್ಲಿಕೆ ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ಅಧಿಸೂಚನೆಯಲ್ಲಿ ನಿಗಧಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|---|
| 01 | ಖಾಸಗಿ ಅಭ್ಯರ್ಥಿಗಳು ಜಿಲ್ಲಾ ಉಪನಿರ್ದೇಶಕರ ಕಛೇರಿಯಲ್ಲಿ ನೋಂದಣಿ ಮಾಡಿಕೊಳ್ಳುವುದು. | 01.09.2017 | 12.09.2017 |
| 02 | ಶಾಲೆಯವರು ಶಾಲಾ /ಖಾಸಗಿ /ಪುನರಾವರ್ತಿತ ಅಭ್ಯರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕಾರ. | 06.09.2017 | 14.09.2017 |
| 03 | ಪರೀಕ್ಷಾ ಶುಲ್ಕ ಬ್ಯಾಂಕಿಗೆ NEFT ಚಲನ್ ಮೂಲಕ ಜಮೆ. | 11.09.2017 | 16.09.2017 |
| 04 | ನಾಮಿನಲ್ ರೋಲ್ ಪ್ರಸ್ತಾವನೆ ಹಾಗೂ ಬ್ಯಾಂಕ್ ಚಲನ್‌ನ ಮೂಲ ಪ್ರತಿ ಶಾಲೆಗಳಿಂದ ಮಂಡಳಿಗೆ ತಲುಪಿಸುವುದು. | 15.09.2017 | 21.09.2017 |
| 05 | ಹೊಸದಾಗಿ ಶಾಲಾ ಸಂಕೇತವನ್ನು ಮಂಡಳಿಯಿಂದ ಪಡೆಯಲು ಕೊನೆಯ ದಿನಾಂಕ. | 31.08.2017 | 12.09.2017 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕಗಳವರೆಗೆ ವಿದ್ಯಾರ್ಥಿಗಳಿಂದ ಶುಲ್ಕ ಸ್ವೀಕರಿಸಬಹುದಾಗಿದೆ. ಇದರ ಸದುಪಯೋಗವನ್ನು ಪಡೆಯುವಲ್ಲಿ ಕ್ರಮವಹಿಸುವುದು. ಈ ಮಾಹಿತಿಯನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳಿಗೆ ಸೂಚಿಸಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

(ವಿ. ಸುಮಂಗಲ)
ನಿರ್ದೇಶಕರು, ಪರೀಕ್ಷೆಗಳು

ಗೆ

1) ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4) ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.